ಓ.ಎಸ್. ನಂ. 53/2019

ಪಿ.ಡಬ್ಲ್ಯು: 03 (ಕರಿಯಪ್ಪ)

ದಿನಾಂಕಃ 23.08.2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀಸವಾಲುಃ ಪ್ರತಿವಾದಿ ಪರ – ಶ್ರೀ JKR ವಕೀಲರಿಂದ.

ಪ್ರತಿವಾದಿಗಳ ಪರಿಚಯ ಇದೆ. ವಾದಿಗಳು ಮೂಲತಃ ನಾಗರಕೊಂಡ ಗ್ರಾಮದವರು ಎಂದರೆ ಐಯನಹಳ್ಳಿ ಗ್ರಾಮದವರು. ದಾವಾ ಸ್ವತ್ತಿನ ಸರ್ವೆ ನಂಬರ್, ಚೆಕ್‌ಬಂದಿ ಹಾಗೂ ವಿಸ್ತೀರ್ಣ ನನಗೆ ಗೊತ್ತಿಲ್ಲ. ದಾವಾ ಸ್ವತ್ತನ್ನು ನೋಡಿರುತ್ತೇನೆ. ದಾವಾ ಆಸ್ತಿಯ ಪಶ್ಚಿಮಕ್ಕೆ ಮರಿಯಮ್ಮಳ ಆಸ್ತಿ ಇದೆ ಎಂದರೆ ಹೌದು. ಅವರ ಆಸ್ತಿಯ ಸರ್ವೆ ನಂಬರ್ 428 ಎ/1 ಎಂದರೆ ನನಗೆ ಗೊತ್ತಿಲ್ಲ. ನಮ್ಮ ಹೊಲ ದಾವಾ ಸ್ವತ್ತಿನ ಯಾವ ದಿಕ್ಕಿಗೆ ಇದೆ ಎಂದು ನನಗೆ ಹೇಳಲಾಗುವುದಿಲ್ಲ. ಆದರೆ ನಮ್ಮ ಹೊಲದ ಎಡಕ್ಕೆ ದಾವಾ ಸ್ವತ್ತು ಇದೆ. ವಾದಿಗೆ ಸದರಿ ಜಮೀನು ಹೇಗೆ ಬಂತು ಎಂದು ನನಗೆ ಗೊತ್ತಿಲ್ಲ. ಸಾಕ್ಷಿ ಮುಂದುವರೆದು ಅವರು ಉಳುಮೆ ಮಾಡುತ್ತಿರುವುದನ್ನು ನಾನು ನೋಡಿರುತ್ತೇನೆ. ದಾವಾ ಆಸ್ತಿಗೆ ಸಂಬಂಧಪಟ್ಟ ದಾಖಲಾತಿಗಳನ್ನು ನಾನು ನೋಡಿರುವುದಿಲ್ಲ. ಅದನ್ನು ಖರೀದಿ ಮಾಡಿರುತ್ತಾರೋ ಅಥವಾ ಪಿತ್ರಾರ್ಜಿತ ಆಸ್ತಿಯೋ ನನಗೆ ಗೊತ್ತಿಲ್ಲ.

ದಾವಾ ಆಸ್ತಿ ವಾದಿಗೆ ಸೇರಿದ್ದು ಎಂದು ನನಗೆ ಯಾರು ಹೇಳಿರುವುದಿಲ್ಲ. ದಾವಾ ಆಸ್ತಿ ಪ್ರತಿವಾದಿಗಳಿಗೆ ಸೇರಿದ್ದು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ವಾದಿ ಉಳುಮೆ ಮಾಡುತ್ತಿರುವುದನ್ನು ನಾನು ನೋಡಿರುತ್ತೇನೆ. ವಾದಿ ಎಂದಿಗೂ ದಾವಾ ಆಸ್ತಿಯಲ್ಲಿ ಸ್ವಾಧೀನದಲ್ಲಿ ಇಲ್ಲ ಎಂದರೆ ಸರಿಯಲ್ಲ. ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಮುಕ್ತಾಯ.

ಮರು-ವಿಚಾರಣೆ ಇಲ್ಲ.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.,

ಕೂಡ್ಲಿಗಿ.